ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಖಾಲಿ ಇರುವ ಹುದ್ದೆಗಳ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1301 (1468) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಎಷ್ಟು ವರ್ಷಗಳಿಂದ ಭರ್ತಿ ಮಾಡಿರುವುದಿಲ್ಲ; (ವಿವರ ನೀಡುವುದು)

(ಇ) ಹುದ್ದೆಗಳು ಖಾಲಿ ಇರುವುದರಿಂದ ಸರ್ಕಾರದ ಕೆಲಸ ಕಾರ್ಯಗಳಿಗೆ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿಲ್ಲವೇ;

(ಈ) ಅತ್ಯಗತ್ಯ ಸೇವೆಗಳ ಇಲಾಖೆಗಳಾದ ಆರೋಗ್ಯ, ಪೊಲೀಸ್, ಅರಣ್ಯ, ಶಿಕ್ಷಣ ಮತ್ತು ಕಂದಾಯ ಇಲಾಖೆಗಳಲ್ಲಿ ಖಾಲಿ ಇರುವ ಸಂಪೂರ್ಣ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕಿರುವ ತೊಂದರೆಯಾದರು ಏನು ;

(ಉ) ಅದೇ ರೀತಿಯಾಗಿ ರಾಜ್ಯದಲ್ಲಿರುವ ನಿರುದ್ಯೋಗಿಗಳ ಸಂಖ್ಯೆ ಎಷ್ಟು ;

(ಊ) ಕನಿಷ್ಠ ಪಕ್ಷ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿದ್ದಲ್ಲಿ ದೊಡ್ಡ ಸಂಖ್ಯೆಯಲ್ಲಿರುವ ನಿರುದ್ಯೋಗಿಗಳ ಬವಣೆಯನ್ನು ಪರಿಹರಿಸಲು ಸರ್ಕಾರ ನಡೆಸಿರುವ ಚಿಂತನೆ ಏನು ? (ವಿವರ ನೀಡುವುದು)